ಅಧ್ಯಕ್ಷರು: ಹೀಗೆ ನಿಗದಿತ ಸಮಯಕ್ಕಿಂತ ಜಾಸ್ತಿಯಾಗುವುದನ್ನು ಮುಂದುವರಿಸಲು ಸಾಧ್ಯವಾಗುವುದಿಲ್ಲ. ದಯವಿಟ್ಟು ಸಹಕರಿಸಬೇಕು. ಪ್ರಶ್ನೆಗಳು ಲ್ಯಾಪ್ಸ್ ಆಗದ ಹಾಗೆ ಅವಕಾಶವನ್ನು ಮಾಡಿಕೊಡುತ್ತೇವೆ. ಆದ್ದರಿಂದ ಇವೊತ್ತು ಉಳಿದ ಪ್ರಶ್ನೆಗಳನ್ನು ಮುಂದುವರಿಸಲಾಗುವುದಿಲ್ಲ. ದಯವಿಟ್ಟು ಸಹಕರಿಸಿ. ನಮ್ಮಲ್ಲಿ ಕ್ವೆಶ್ಚನ್ ಅವರ್ ಎಂದಿದೆಯೇ ಹೊರತು ಕ್ವೆಶ್ಚನ್ ಅವರ್ಸ್ ಎಂದು ಇಲ್ಲ. ಹಿಂದೆ ಕೂಡ ಇಂಥ ಪ್ರಶ್ನೆಗಳನ್ನು ನಾವು ಲ್ಯಾಪ್ಸ್ ಮಾಡಿಲ್ಲ.

ಶ್ರೀ ಎಸ್.ಎಂ.ಕೃಷ್ಣ: ಮಾನ್ಯ ಅಧ್ಯಕ್ಷರೇ, ಮಾನ್ಯ ಸದಸ್ಯರುಗಳು ಯಾವ ದಿನಾಂಕದಂದು ಮುಂದಕ್ಕೆ ಹಾಕಿದ ಪ್ರಶ್ನೆಗಳನ್ನು ತೆಗೆದುಕೊಳ್ಳುತ್ತೀರಿ ಎಂದು ಪ್ರಶ್ನಿಸುವುದು ಸೌಜನ್ಯವಲ್ಲ. ಮಾನ್ಯ ಅಧ್ಯಕ್ಷರು ಆ ಸ್ಥಾನದಿಂದ ಭರವಸೆಯನ್ನು ಕೊಡುತ್ತಾ ಇದ್ದಾರೆ. ಮುಂದಿನ ದಿನಗಳಲ್ಲಿ ಈ ಪ್ರಶ್ನೆಗಳನ್ನು ಹಾಕುತ್ತೇವೆ, ಯಾವ ಪ್ರಶ್ನೆಗಳೂ ಲ್ಯಾಪ್ಸ್ ಆಗುವುದಿಲ್ಲ ಎಂದು ಭರವಸೆ ಕೊಟ್ಟರುವುದು ನಾವು ಕಾದು ನೋಡಬೇಕಾಗುತ್ತದೆ.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು:

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹಸಚಿವರು): ಮಾನ್ಯ ಅಧ್ಯಕ್ಷರೇ, ಹದಿನಾಲ್ಕನೇ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ 155 ಪ್ರಶ್ನೆಗಳ ಪೈಕಿ 115 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತೇನೆ.

ಪದವಿ ಕಾಲೇಜುಗಳಿಂದ ಪದವಿ ಪೂರ್ವ ಶಿಕ್ಷಣವನ್ನು ಬೇರ್ಪಡಿಸಿರುವುದು.

1764(2292)

ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿ ಪಿಯುಸಿ ಶಿಕ್ಷಣವನ್ನು ಪದವಿ ಕಾಲೇಜುಗಳಿಂದ ಬೇರ್ಪಡಿಸಲಾಗಿದೆಯೇ;

2) ಬೇರ್ಪಡೆಯಾಗಿರುವುದರಿಂದ ಸಾಕಷ್ಟು ಸಂಖ್ಯೆಯಲ್ಲಿ ಕಿರಿಯ ಕಾಲೇಜುಗಳು ಇಲ್ಲದೇ ಇರುವುದರಿಂದ ವಿದ್ಯಾರ್ಥಿಗಳಿಗೆ ಪ್ರವೇಶಕ್ಕೆ ಅನಾನುಕೂಲತೆಯುಂಟಾಗಿ ತೊಂದರೆಯಾಗಿರುವುದನ್ನು ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

3) ಸರ್ಕಾರಿ ಕಿರಿಯ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಸೂಕ್ತ ಕ್ರಮ ಕೈಗೊಂಡಿದೆಯೆ;

4) ಹಾಗಿದ್ದಲ್ಲಿ ಅದರ ವಿವರಗಳೇನು?

ಶ್ರೀ ಹೆಚ್.ವಿಶ್ವನಾಥ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು): 1) ಹೌದು.

2) ಈವರೆಗೂ ಯಾವುದೇ ವಿದ್ಯಾರ್ಥಿಗೆ ಪಿಯುಸಿ ತರಗತಿಗಳ ಪ್ರವೇಶಕ್ಕೆ ಅನಾನುಕೂಲಗಳು ಉಂಟಾಗಿರುವುದಕ್ಕೆ ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. ಪಿಯುಸಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸುವ ದೃಷ್ಟಿಯಿಂದ ಈಗಾಗಲೇ 25 ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಅಗತ್ಯವಿರುವ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಬಂದಿರುವ ಪ್ರಸ್ತಾಪಗಳನ್ನು ಪರಿಗಣಿಸಿ ಪದವಿ ಪೂರ್ವ ಕಾಲೇಜುಗಳನ್ನು ಸ್ಥಾಪಿಸಲು ಅನುಮತಿ ನೀಡಲಾಗಿದೆ. ಇದರ ಜೊತೆಗೆ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಪದವಿ ಪೂರ್ವ ಕಾಲೇಜುಗಳಿಗೆ ಹೆಚ್ಚಿನ ವಿಭಾಗಗಳನ್ನು ತೆರೆಯಲು ಸಹ ಕೋರಿಕೆಯ ಮೇಲೆ ಅನುಮತಿ ನೀಡಲಾಗಿದೆ.

3 ಮತ್ತು 4) ಹೌದು. ಪ್ರಸ್ತುತ ಶೈಕ್ಷಣಿಕ ಸಾಲಿನಿಂದ ಎರಡು ವರ್ಷಗಳವರೆಗೆ ಹಾಲಿ ಇರುವ ಕಾಲೇಜಿನ ಕಟ್ಟಡ ಮತ್ತು ಆಂತರಿಕ ಸೌಲಭ್ಯಗಳನ್ನೇ ಪದವಿ ಪೂರ್ವ ತರಗತಿಗಳಿಗೂ ಉಪಯೋಗಿಸಿಕೊಳ್ಳಲಾಗುವುದು. ಮುಂದೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಸಲುವಾಗಿ ಸರ್ಕಾರವು ಹೆಚ್ಚಿನ ಗಮನ ನೀಡಲಾಗುವುದು.

ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ.

1765(2293)

ಶ್ರೀ ಎಂ.ಎಸ್.ಆತ್ಮಾನಂದ(ಮಂಡ್ಯ): ಮಾನ್ಯ ಪ್ರಾಥಮಿಕ ಹಾಗು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇರುವುದನ್ನು ಸರ್ಕಾರ ಅರಿತಿದೆಯೆ;